# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 23
**ಸದಸ್ಯರ ಹೆಸರು** : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)
**ಉತ್ತರಿಸುವವರು** : ಮಾನ್ಯ ಮುಖ್ಯಮಂತ್ರಿಯವರು.
**ಉತ್ತರಿಸಬೇಕಾದ ದಿನಾಂಕ** : 17.08.2026.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನ ಅಲಬನೂರು ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ಜನರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಸಿಂಧನೂರು ತಾಲ್ಲೂಕಿನ ಅಲಬನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ಜನರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಅಲಬನೂರು ಗ್ರಾಮದ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ವಾರ್ಡ್‌ಗೆ ಹೊಸ ಅಂಗನವಾಡಿ ಕೇಂದ್ರ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ; | ಅಲಬನೂರು ಗ್ರಾಮವು ಒಟ್ಟು 2534 ಜನ ಸಂಖ್ಯೆಯನ್ನು ಹೊಂದಿದ್ದು, ಹೊಸ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲು ಇರುವ ಮಾರ್ಗಸೂಚಿಯನ್ವಯ ಒಟ್ಟು 03 ಅಂಗನವಾಡಿ ಕೇಂದ್ರಗಳನ್ನು ಸದರಿ ಗ್ರಾಮಕ್ಕೆ ಮಂಜೂರು ಮಾಡಲಾಗಿದ್ದು, ಪರಿಶಿಷ್ಟ ಜಾತಿಯ ಸಮುದಾಯ ವಾಸಿಸುತ್ತಿರುವ ಪ್ರದೇಶದಲ್ಲಿ ಒಟ್ಟು 543 ಜನಸಂಖ್ಯೆಯನ್ನು ಹೊಂದಿದ್ದು, ಒಂದು ಪ್ರತ್ಯೇಕ ಅಂಗನವಾಡಿ ಕಾರ್ಯನಿರ್ವಹಿಸುತ್ತಿರುತ್ತದೆ.<br><br>2022-23ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ, 08 ಹೊಸ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗಿರುತ್ತದೆ.<br><br>ಪ್ರಸ್ತುತ ಅಲಬನೂರು ಗ್ರಾಮದ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ವಾರ್ಡ್‌ಗೆ ಹೊಸ ಅಂಗನವಾಡಿ ಕೇಂದ್ರ ಮಂಜೂರಾತಿ ಕೋರಿ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ.<br><br>ಐಸಿಡಿಎಸ್ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಹೊಸ ಅಂಗನವಾಡಿ ಕೇಂದ್ರಗಳ ಮಂಜೂರಾತಿಯು ಕೇಂದ್ರ ಸರ್ಕಾರದ ವ್ಯಾಪ್ತಿಗೆ ಒಳಪಟ್ಟಿದ್ದು, ಕೇಂದ್ರ ಸರ್ಕಾರದ ಅನುಮೋದನೆ ನೀಡಿದಲ್ಲಿ ಹೆಚ್ಚುವರಿ ಅಂಗನವಾಡಿ ಕೇಂದ್ರದ ಮಂಜೂರಾತಿಗಾಗಿ ಕ್ರಮವಹಿಸಲಾಗುವುದು. |
| ಇ) | ಸಿಂಧನೂರು ತಾಲ್ಲೂಕಿನ ಅಲಬನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ವಾರ್ಡ್‌ಗೆ ಹೊಸ ಅಂಗನವಾಡಿ ಕೇಂದ್ರವನ್ನು ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು? | |

**ಸಂಖ್ಯೆ: ಮಮಇ 224 ಐಸಿಡಿ 2026**

**(ಡಿ.ಕೆ. ಶಿವಕುಮಾರ್)**
ಮುಖ್ಯಮಂತ್ರಿ